**ಕರ್ನಾಟಕ ಸರ್ಕಾರದ ನಡವಳಿ**

**ವಿಷಯ:** ಶ್ರೀ ಬಿ.ಮಹದೇವಯ್ಯ ಇವರು ಉಡಿಗಾಲ ಗ್ರಾಮ ಪಂಚಾಯಿತಿ, ಚಾಮರಾಜನಗರ ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ಧ ನಡೆಸಲಾದ ಇಲಾಖಾ ವಿಚಾರಣೆ-ಅಂತಿಮ ಆದೇಶ ಹೊರಡಿಸುವ ಬಗ್ಗೆ-ಆದೇಶ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/539/ಗ್ರಾಪಂಕಾ/2016 ದಿನಾಂಕ: 03-10-2013
2. ಅಪರ ನಿಭಂಧಕರು ವಿಚಾರಣೆಗಳು-10 ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: LOK/INQ/ 14-A/478/2013/ARE-10 Dt:10-08-2016
3. ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ; LOK/ARE-10/ENQ-478/2013/ Dt:26-08-2016.
4. ನಿಭಂಧಕರು ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರ ಪತ್ರ ಸಂಖ್ಯೆ; LOK/ARE-10/ENQ-478/2013/ Dt:29-08-2016
5. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ/539/ಗ್ರಾಪಂಕಾ/2016 ದಿನಾಂಕ: 18-01-2017.
6. ಶ್ರೀ ಬಿ.ಮಹದೇವಯ್ಯ ಇವರು ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿ: 17-02-2017.

**ಪ್ರಸ್ತಾವನೆ :**

ಮೇಲೆ ಕ್ರಮ ಸಂಖ್ಯೆ: (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ಬಿ.ಮಹದೇವಯ್ಯ ಇವರು ಉಡಿಗಾಲ ಗ್ರಾಮ ಪಂಚಾಯಿತಿ, ಚಾಮರಾಜನಗರ ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಯಿತು. ಆದರಂತೆ ಅಪರ ನಿಬಂಧಕರು ವಿಚಾರಣೆಗಳು-4, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

**"ದೋಷಾರೋಪಣೆ"**

" ನೀವು ಶ್ರೀ ಬಿ.ಮಹದೇವಯ್ಯ ಚಾಮರಾಜನಗರ ತಾಲ್ಲೂಕು ಮತ್ತು ಜಿಲ್ಲೆ ಉಡಿಗಾಲ ಗ್ರಾಮ ಪಂಚಾಯತಿಯಲ್ಲಿ ಕಾರ್ಯದರ್ಶಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ದೂರುದಾರರಾದ ಶ್ರೀ ಚಿಕ್ಕಲಿಂಗಪ್ಪ ಬಿನ್ ಲೇಟ್ ಲಿಂಗಯ್ಯ, ಉಡಿಗಾಲ ಗ್ರಾಮ, ಚಾಮರಾಜನಗರ ತಾಲ್ಲೂಕು ಮತ್ತು ಜಿಲ್ಲೆ ರವರು ಉಡಿಗಾಲ ಗ್ರಾಮದ ಸ.ನಂ.366/1 ರಲ್ಲಿನ ನಿವೇಶನಗಳಿಗೆ ಸಂಬಂಧಿಸಿದಂತೆ ಮಾನ್ಯ ಲೋಕಾಯುಕ್ತರಿಗೆ ದೂರು ನೀಡಿದ್ದರು. ಸದರಿ ಪ್ರಕರಣ ಸಂಖ್ಯೆ: ಕಂಪ್ಲೇಂಟ್/ಉಪಲೋಕ್/ಎಮ್‌ವೈಎಸ್-311& 318/2004/ಎಆರ್‌ಇ-7, ದಿನಾಂಕ:06-11-2013ಕ್ಕೆ ಸಂಬಂಧಿಸಿದಂತೆ ಆಕ್ಷೇಪಣೆ/ಪ್ರತ್ಯುತ್ತರ ನೀಡುವಂತೆ ನಿಮಗೆ ದಿನಾಂಕ:01-01-2013ರಲ್ಲಿ ಸೂಚಿಸಲಾಗಿತ್ತು. ಎದುರುದಾರರಾದ ನೀವು ನಿಮ್ಮ ಆಕ್ಷೇಪಣೆ/ಹೇಳಿಕೆಯನ್ನು ನೀಡದಿದ್ದ ಕಾರಣ ನಿಮಗೆ ದಿನಾಂಕ:16-03-2013ರಲ್ಲಿ ಕಾರಣ ಕೇಳಿ ನೋಟೀಸು ಜಾರಿಮಾಡಲಾಗಿತ್ತು. ಸದರಿ ನೋಟಿಸಿಗೆ ಚುನಾವಣಾ ಕಾರ್ಯದಲ್ಲಿ ತೊಡಗಿದ್ದ ಕಾರಣ ಉತ್ತರ ನೀಡಲು ಸಾಧ್ಯವಾಗಲಿಲ್ಲ ಎಂದು ತಿಳಿಸಿದ್ದು, ಕಾಲಾವಕಾಶ ಕೋರಿದ್ದೀರಿ. ಆದರೇ ಸಾಕಷ್ಟು ಕಾಲಾವಕಾಶ ನೀಡಿದ್ದರೂ ನೀವು ಈ ಕೇಸಿಗೆ ಸಂಬಂಧಿಸಿದಂತೆ ಆಕ್ಷೇಪಣೆ/ಪ್ರತ್ಯುತ್ತರ ಸಲ್ಲಿಸಿರುವುದಿಲ್ಲ. ಆದ್ದರಿಂದ ನೀವು ಸರ್ಕಾರಿ ಕರ್ತವ್ಯ ಪಾಲನೆಯಲ್ಲಿ ಸಂಪೂರ್ಣ ಪ್ರಾಮಾಣಿಕತೆ ಹಾಗೂ ನಿಷ್ಠೆ ತೋರದೆ ಮತ್ತು ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ನಾಟಕ ನಾಗರೀಕ ಸೇವಾ(ನಡತೆ) ನಿಯಮ 1966ರ ನಿಯಮ 3(1) (i) ರಿಂದ (iii) ಅನ್ವಯ ದುರ್ನಡತೆ ಎಸಗಿರುತ್ತೀರಿ."

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ವರದಿಯಲ್ಲಿ ಶ್ರೀ ಬಿ.ಮಹದೇವಯ್ಯ ಇವರು ಉಡಿಗಾಲ ಗ್ರಾಮ ಪಂಚಾಯಿತಿ, ಚಾಮರಾಜನಗರ ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ಧದ ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ. ಈ ವರದಿಯನ್ನು ಮಾನ್ಯ ಉಪಲೋಕಾಯುಕ್ತರು ಅಂಗೀಕರಿಸಿ ಶ್ರೀ ಬಿ.ಮಹದೇವಯ್ಯ ಇವರ ವಿರುದ್ಧ ಸಾಬೀತಾಗಿರುವ ಆರೋಪಕ್ಕೆ ಅನುಗುಣವಾಗಿ ಸದರಿಯವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 8(iii) ಅಡಿಯಲ್ಲಿ ನಿರ್ದಿಷ್ಟಪಡಿಸಿರುವಂತೆ "ಎರಡು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ರಹಿತ ಪರಿಣಾಮಗಳೊಂದಿಗೆ ಐದು ವರ್ಷಗಳ ಅವಧಿಗೆ ತಡೆಹಿಡಿಯುವಂತೆ" ದಂಡನೆ ವಿಧಿಸಲು ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ವರದಿಯಲ್ಲಿ ಶಿಫಾರಸ್ಸು ಮಾಡಿರುತ್ತಾರೆ. ಈ ಸಂಬಂಧ ಶ್ರೀ ಬಿ.ಮಹದೇವಯ್ಯ, ಇವರಿಗೆ ನಿಯಮಾನುಸಾರ

ಕ್ರಮಸಂಖ್ಯೆ (5) ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿ ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ 2ನೇ ಕಾರಣ ಕೇಳುವ ನೋಟೀಸ್‌ನ್ನು ಜಾರಿಗೊಳಿಸಲಾಗಿತ್ತು. ಈ ನೋಟೀಸಿಗೆ ಅವರು ಮೇಲೆ ಕ್ರಮ ಸಂಖ್ಯೆ (6) ರಲ್ಲಿ ಓದಲಾದ ದಿನಾಂಕ: 17-02-2017 ರಲ್ಲಿ ತಮ್ಮ ಲಿಖಿತ ಹೇಳಿಕೆ ಸಲ್ಲಿಸಿರುತ್ತಾರೆ.

ಆಪಾದಿತ ನೌಕರರು ಸರ್ಕಾರದ 2ನೇ ಕಾರಣ ಕೇಳುವ ನೋಟಿಸಿಗೆ ನೀಡಿರುವ ಲಿಖಿತ ಹೇಳಿಕೆಯಲ್ಲಿ ಈ ಕೆಳಕಂಡ ಪ್ರಮುಖ ಆಕ್ಷೇಪಣೆಗಳನ್ನು ಸಲ್ಲಿಸಿರುತ್ತಾರೆ.

- ನಾನು ಘಟನೆ ನಡೆದ ಸಮಯದಲ್ಲಿ ಸದರಿ ಗ್ರಾಮ ಪಂಚಾಯತಿಯಲ್ಲಿ ಕರ್ತವ್ಯ ನಿರ್ವಹಿಸಿತ್ತಿರುವುದಿಲ್ಲವೆಂದು ಹಾಗೂ ಆ ಸಮಯದಲ್ಲಿ ಶ್ರೀ ಎನ್. ಮಾದಪ್ಪ ಎಂಬುವವರು ಕಾರ್ಯದರ್ಶಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದರೆಂದು ತಿಳಿಸಿರುತ್ತಾರೆ.
- ದಿ:03.10.2016 ರಲ್ಲಿ ಮಾನ್ಯ ಉಪಲೋಕಾಯುಕ್ತ ರವರು ವಿಚಾರಣೆಗಳು-7 ಕಳುಹಿಸಿರುವ ನೋಟೀಸ್ ಮಾತ್ರ ನನಗೆ ತಲುಪಿದೆ ಉಳಿದ ನೋಟೀಸ್ ನನಗೆ ಜಾರಿ ಆಗಿರುವುದಿಲ್ಲ ಇದಕ್ಕೆ ಉತ್ತರ ನೀಡಲಿಲ್ಲವೆಂಬ ಕಾರಣವನ್ನು ಬಿಟ್ಟರೆ ನನಗೂ ಈ ದೂರಿನ ವಿಚಾರಕ್ಕೂ ಯಾವುದೇ ಸಂಬಂಧವಿರುವುದಿಲ್ಲ ಹಾಗೂ ಗ್ರಾಮ ಪಂಚಾಯಿತಿಯಲ್ಲಿ ಯಾವುದೇ ಹಣ ದುರುಪಯೋಗ ಮಾಡಿಕೊಂಡಿರುವುದಿಲ್ಲ. ಆದ್ದರಿಂದ ಮಾನ್ಯ ಉಪಲೋಕಾಯುಕ್ತರು ಮಾಡಿರುವ ಆದೇಶವನ್ನು ಕೈಬಿಟ್ಟು ನನಗೆ ನ್ಯಾಯ ದೊರಕಿಸಿಕೊಡಬೇಕೆಂದು ಮನವಿ ಮಾಡಿಕೊಳ್ಳುತ್ತೇನೆ ಎಂದು ತಿಳಿಸಿರುತ್ತಾರೆ.

ವಿಚಾರಣಾಧಿಕಾರಿಯವರು ತಮ್ಮ ವರದಿಯಲ್ಲಿ ಆಪಾದಿತರ ವಿರುದ್ಧದ ಆರೋಪಗಳನ್ನು ಸಾಬೀತು ಪಡಿಸಲು ವಿವರವಾದ ಕಾರಣಗಳನ್ನು ನೀಡಿರುತ್ತಾರೆ. ಪ್ರಮುಖವಾಗಿ ವರದಿಯ ಕಂಡಿಕೆ 14 ರಿಂದ 18 ರಲ್ಲಿ ಮೇಲ್ಕಂಡ ಅಂಶಗಳನ್ನು ಅಲ್ಲಗಳೆಯಲು ಸಮರ್ಥವಾದ ಕಾರಣಗಳನ್ನು ನೀಡಿರುತ್ತಾರೆ. ಅವುಗಳನ್ನು ಈ ಕೆಳಗಿನಂತೆ ಪುನರುಚ್ಚರಿಸಿದೆ.

14. In the cross examinations, PW1 has denied that DGO was not working as Secretary in Udigala Gram Panchayath. But DGO himself suggested to PW1 that he worked as Secretary from 19.01.2013 to 06.08.2013only. In the written statement, DGO has clearly admitted notice dt.01.01.2013 was issued to him calling upon him to file his comments/objections on or before 24.01.2013 and the said notice was served on him on 01.02.2013. Therefore. It is very clear that on the date of service of said notice, DGO was very much working in Udigala Gram Panchayath as Secretary.

15. It is also suggested to PW1 that on 20.05.2013, DGO has written a letter and sought for time stating that he is busy in election duty. This fact also clearly shows that the notice and show cause notice was served on DGO, but the DGO has failed to file his comments or objections and failed to cooperate with the investigation.

16. The DGO who is examined as DW1 has deposed that from 01.02.2013 to 06.07.2013, he was working as Secretary of Udigala Gram Panchayath, Chamarajanagar taluk, he has not received any notice dt. 01.01.2013, but he has received show cause notice dt.16.03.2013 on 22.03.2013. Further DW1 has deposed that he was on deputation to Maliyur Gram Panchayath and also was engaged in assembly elections, therefore he could not give reply to show cause notice in time. DGO also produced the copy of the letter dt.08.11.2013 addressed to the Under Secretary, Rural Development and Panchayath Raj Department, Bangalore in which DGO also admitted that he was not aware how to file the objections to the notice issued by the office of the Upalokayukta.

17. DGO himself has deposed that vide letter dt.20.06.2013, he gave requisition to ARE 7 for grant of time to file his reply. The incumbency certificate Ex D6 also shows that from 21.01.2013 to 15.08.2013, DGO was working as Secretary in Udigala Gram Panchayath, he received the show cause notice as admitted by him, but has not filed his comments/objections. Therefore the contention taken by the DGO the he was additional incharge in another Gram Panchayath, hea was busy in assembly elections, he was busy in receiving the applications online for issuing ration cards, therefore he could not file his comments/objections in time, cannot be a accepted.

18. In the cross examination. DW1 has also admitted that he received the show cause notice dt. 16.03.2013 and he has not replied to the said notice. Therefore I hold that inspite of notice and show cause notice in Compt/Uplok/Mys/311 and 318/2004, inspite of service of notice and show cause notices, DGO has failed to file his comments/objections,

DGO has shown non cooperation for investigation. Thereby the DGO failed to maintain absolute integrity besides devotion to duty and acted in a manner unbecoming of a Government Servant. Hence, I proceed to answer point No. 1 in the affirmative.

ಸರ್ಕಾರವು ಆಪಾದಿತರು 2ನೇ ಕಾರಣ ಕೇಳುವ ನೋಟೀಸಿಗೆ ನೀಡಿರುವ ಲಿಖಿತ ಹೇಳಿಕೆ ಮತ್ತು ವಿಚಾರಣಾ ನಡವಳಿ, ದಾಖಲೆಗಳು ಮತ್ತು ಸಾಕ್ಷ್ಯಾಧಾರಗಳನ್ನು ವಿವರವಾಗಿ ಪರಿಶೀಲಿಸಿದೆ. ವಿಚಾರಣಾಧಿಕಾರಿಯವರು ವಿವರವಾದ ಸಮರ್ಥನೆಯೊಂದಿಗೆ ಆರೋಪವನ್ನು ಸಾಬೀತುಪಡಿಸಿರುತ್ತಾರೆ. ಮಾನ್ಯ ಉಪಲೋಕಾಯುಕ್ತರು ವಿಚಾರಣಾ ವರದಿಯನ್ನು ಅಂಗೀಕರಿಸಿ ಆರೋಪದ ತೀರ್ವತೆಗೆ ಅನುಗುಣವಾಗಿ ಶ್ರೀ ಬಿ.ಮಹದೇವಯ್ಯ ಇವರು ಉಡಿಗಾಲ ಗ್ರಾಮ ಪಂಚಾಯಿತಿ, ಚಾಮರಾಜನಗರ ತಾಲ್ಲೂಕು ಮತ್ತು ಜಿಲ್ಲೆ ರವರಿಗೆ "ಎರಡು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ರಹಿತ ಪರಿಣಾಮಗಳೊಂದಿಗೆ ಐದು ವರ್ಷಗಳ ಅವಧಿಗಳೊಂದಿಗೆ ತಡೆಹಿಡಿಯುವಂತೆ" ದಂಡನೆ ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ. ವಿಚಾರಣಾಧಿಕಾರಿಯವರು ಆಪಾದನೆಯನ್ನು ಸಾಬೀತುಪಡಿಸಲು ತಮ್ಮ ವರದಿಯಲ್ಲಿ ವಿವರವಾದ ಕಾರಣಗಳನ್ನು ನೀಡಿರುತ್ತಾರೆ. ಸದರಿ ಕಾರಣಗಳು ಸಮರ್ಥನೀಯವಾಗಿರುತ್ತದೆ. ಆದುದರಿಂದ ಶ್ರೀ ಬಿ.ಮಹದೇವಯ್ಯ, ಇವರು 2ನೇ ಕಾರಣ ಕೇಳುವ ನೋಟೀಸಿಗೆ ನೀಡಿರುವ ಆಕ್ಷೇಪಣೆಗಳನ್ನು ಒಪ್ಪಲು ಬರುವುದಿಲ್ಲ. ಆದುದರಿಂದ ಸರ್ಕಾರವು ವಿಚಾರಣಾ ವರದಿ ಹಾಗೂ ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸನ್ನು ಪರಿಶೀಲಿಸಿ ಶ್ರೀ ಬಿ.ಮಹದೇವಯ್ಯ ಇವರು ಉಡಿಗಾಲ ಗ್ರಾಮ ಪಂಚಾಯಿತಿ, ಚಾಮರಾಜನಗರ ತಾಲ್ಲೂಕು ಮತ್ತು ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 8(iii) ಅಡಿಯಲ್ಲಿ ನಿರ್ದಿಷ್ಟಪಡಿಸಿರುವಂತೆ "ಎರಡು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ರಹಿತ ಪರಿಣಾಮಗಳೊಂದಿಗೆ ಐದು ವರ್ಷಗಳ ಅವಧಿಗೆ ತಡೆಹಿಡಿಯುವಂತೆ" ದಂಡನೆ ವಿಧಿಸಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 539 ಗ್ರಾಪಂಕಾ 2016 ಬೆಂಗಳೂರು, ದಿನಾಂಕ-17-10-2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಬಿ.ಮಹದೇವಯ್ಯ ಇವರು ಉಡಿಗಾಲ ಗ್ರಾಮ ಪಂಚಾಯಿತಿ, ಚಾಮರಾಜನಗರ ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ಧದ ಆರೋಪವು ಸಾಬೀತಾಗಿರುವುದರಿಂದ ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 8(iii) ಅಡಿಯಲ್ಲಿ ನಿರ್ದಿಷ್ಟಪಡಿಸಿರುವಂತೆ "ಎರಡು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ರಹಿತ ಪರಿಣಾಮಗಳೊಂದಿಗೆ ಐದು ವರ್ಷಗಳ ಅವಧಿಗೆ ತಡೆಹಿಡಿಯುವಂತೆ" ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಅಪರ ನಿಬಂಧಕರು, ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಾಮರಾಜನಗರ ಜಿಲ್ಲೆ.
6. ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಚಾಮರಾಜನಗರ ತಾಲ್ಲೂಕು ಮತ್ತು ಜಿಲ್ಲೆ.
7. ಶ್ರೀ ಬಿ.ಮಹದೇವಯ್ಯ ಉಡಿಗಾಲ ಗ್ರಾಮ ಪಂಚಾಯಿತಿ, ಚಾಮರಾಜನಗರ ತಾಲ್ಲೂಕು ಮತ್ತು ಜಿಲ್ಲೆ
8. ಗಣಕ ಕೋಶ
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.